**ವಿಶೇಷ ಸೂಚನೆಗಳು:**

1) ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರಬೇಕು.

2) ಲಿಖಿತ ಪರೀಕ್ಷೆಗೆ/ಸಂದರ್ಶನಕ್ಕೆ ಅರ್ಹರಾದಲ್ಲಿ ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಜಿಯ ಪ್ರತಿಯ ಜೊತೆಗೆ ಲಗತ್ತಿಸಿದ ಎಲ್ಲಾ ಪ್ರಮಾಣ ಪತ್ರಗಳ ಮೂಲ ದಾಖಲಾತಿಗಳನ್ನು ಹಾಜರುಪಡಿಸಬೇಕು. ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

3) ಮೀಸಲಾತಿ ಸಂಬಂಧ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಗಳಲ್ಲಿ ಇರದಿದ್ದಲ್ಲಿ ಅಥವಾ ಸಲ್ಲಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ತಿರಸ್ಕರಿಸಲಾಗುವುದು/ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

4) ಅಭ್ಯರ್ಥಿಯು ಗುಣ ನಡತೆ ಬಗ್ಗೆ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ಗುಣ ನಡತೆ ಪ್ರಮಾಣ ಪತ್ರ ಸಲ್ಲಿಸಬೇಕು.

5) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ಶಾಲೆಯ ವರ್ಗಾವಣೆ ಪ್ರಮಾಣ ಪತ್ರ/ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.

6) ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಈ ಕೆಳಕಂಡ ವಿಷಯಗಳ ಮೇಲೆ ನಡೆಸಲಾಗುವುದು ಮತ್ತು ಆಯಾ ವಿಷಯಕ್ಕೆ ಈ ಕೆಳಕಂಡಂತೆ ಅಂಕಗಳಿರುತ್ತದೆ.

| | | | |
|---|---|---|---|
| (1) | ಕನ್ನಡ ಭಾಷೆ | – | 50 ಅಂಕಗಳು |
| (2) | ಸಾಮಾನ್ಯ ಇಂಗ್ಲೀಷ್ | – | 25 ಅಂಕಗಳು |
| (3) | ಸಾಮಾನ್ಯ ಜ್ಞಾನ | – | 25 ಅಂಕಗಳು |
| (4) | ಬ್ಯಾಂಕಿಂಗ್ ಸಂಬಂಧಿಸಿದ ವಿಷಯ | – | 100 ಅಂಕಗಳು |
| | **ಒಟ್ಟು** | – | **200 ಅಂಕಗಳು** |

ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಅರ್ಹತೆ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:5ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕವನ್ನು ಶೇಕಡ 85ಕ್ಕೆ ಲೆಕ್ಕಾಚಾರ ಮಾಡಲಾಗುವುದು ಹಾಗೂ ಮೌಖಿಕ ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಿದೆ.

7) **ಅರ್ಹತಾ ಷರತ್ತುಗಳು:**

- ಭಾರತೀಯ ನಾಗರೀಕನಾಗಿರತಕ್ಕದ್ದು
- ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ಇದ್ದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.

8) **ದುರ್ನಡತೆ:** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ/ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

9) ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:

ಪ್ರಧಾನ ಕಛೇರಿ: 080–22976621/9108051615, 9108051658, 9108051749,